ನಗರಾಭಿವೃದ್ಧಿ ಸಚಿವರ ಹಾಗೂ ಕಾರ್ಯದರ್ಶಿಗಳ ಕಛೇರಿಗಳ ಕಂಪ್ಯೂಟರೀಕರಣ

2692 (3545) ಶ್ರೀ ಸಭಾಪತಿ ಯು.ಆರ್. (ಉಡುಪಿ) :— ಮಾನ್ಯ ಪೌರಡಳಿತ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಅಡಳಿತ ಮಾಹಿತಿ ತಂತ್ರಜ್ಞಾನ ಅಳವಡಿಕೆ ರಾಜ್ಯ ಸರ್ಕಾರದ ನೀತಿಯಾಗಿದ್ದು ಈ ಹಿನ್ನಲೆಯಲ್ಲಿ ಸನ್ಮಾನ್ಯ ನಗರಾಭಿವೃದ್ಧಿ ಸಚಿವರ ಹಾಗೂ ಇಲಾಖಾ ಕಾರ್ಯದರ್ಶಿಗಳ ಕಛೇರಿಯನ್ನು ಯಾವ ರೀತಿಯಲ್ಲಿ ಕಂಪ್ಯೂಟರೀಕರಣಗೊಳಿಸಲಾಗಿದೆ;

ಆ) ಸಚಿವರ ಹಾಗೂ ಕಾರ್ಯದರ್ಶಿಗಳ ಕಛೇರಿ ಕಂಪ್ಯೂಟರೀಕರಣಗೊಳಿಸುವ ಬಗ್ಗೆ ಸಿದ್ಧಪಡಿಸಿದ ಸಾಫ್ಟ್‌ವೇರ್ ಹಾಗೂ ಈ-ಮೇಲ್ ವಿಳಾಸಗಳ ವಿವರ ಒದಗಿಸುವುದು?

ಶ್ರೀ ಎಂ. ಮಲ್ಲಿಕಾರ್ಜುನ ನಾಗಪ್ಪ (ಪೌರಡಳಿತ ರಾಜ್ಯ ಸಚಿವರು) :—

ಅ) ನಗರಾಭಿವೃದ್ಧಿ ಸಚಿವರ ಹಾಗೂ ನಗರಾಭಿವೃದ್ಧಿ ಇಲಾಖೆಯ ಪ್ರಧಾನ ಕಾರ್ಯದರ್ಶಿಗಳು ಇವರ ಕಛೇರಿಗಳಲ್ಲಿ ಕಂಪ್ಯೂಟರ್‌ಗಳನ್ನು ಅಳವಡಿಸಲಾಗಿದೆ.

ಆ) ಕಂಪ್ಯೂಟರ್‌ಗಳಿಗೆ ಇಂಟರ್‌ನೆಟ್ ಸೌಲಭ್ಯವನ್ನು ಒದಗಿಸುವ ಕುರಿತು ನ್ಯಾಷನಲ್ ಇನ್‌ಫಾರ್ಮೆಟಿಕ್ ಸೆಂಟರ್‌ನೊಂದಿಗೆ ವ್ಯವಹರಿಸಲಾಗುತ್ತಿದೆ. ಪ್ರಧಾನ ಕಾರ್ಯದರ್ಶಿಗಳ ಇ-ಮೇಲ್ ವಿಳಾಸವು: pscud @ secretariat2.Kar. nic.in

ಸಣ್ಣ ಕೈಗಾರಿಕೆಗಳಿಗೆ ರಾಜ್ಯದ ಸಹಾಯಧನ ಬಾಕಿ

2693 (3037) ಶ್ರೀ ಡಿ.ವಿ. ಸದಾನಂದಗೌಡ (ಪುತ್ತೂರು) :— ಮಾನ್ಯ ಸಣ್ಣ ಪ್ರಮಾಣದ ಕೈಗಾರಿಕಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಸಣ್ಣ ಕೈಗಾರಿಕೆಗಳಿಗೆ ರಾಜ್ಯದ ಸಹಾಯಧನ (ಸಬ್ಸಿಡಿ) ನೀಡಲು ಬಾಕಿ ಇರುವ ಹಣವೆಷ್ಟು;

ಆ) ಇದು ಎಷ್ಟು ಕೈಗಾರಿಕೆಗಳಿಗೆ ಎಷ್ಟು ವರ್ಷಗಳಿಂದ ಬಾಕಿ ಇದೆ; (ವಿವರ ನೀಡುವುದು)

ಇ) ಬಾಕಿಯಿರುವ ಸಹಾಯಧನವನ್ನು ಎಂದು ನೀಡಲಾಗುವುದು?

ಶ್ರೀ ಎಸ್.ಆರ್. ಕಾಶಪ್ಪನವರ್ (ಸಣ್ಣ ಪ್ರಮಾಣದ ಕೈಗಾರಿಕಾ ಸಚಿವರು) :—

31-3-2001 ರ ಅಂತ್ಯಕ್ಕೆ ರೂ. 338.57 ಕೋಟಿ ಸಹಾಯಧನ ನೀಡಲು ಬಾಕಿ ಇದ್ದು ಇತ್ತೀಚೆಗೆ ಇದರಲ್ಲಿ ರೂ. 10.00 ಕೋಟಿಗಳನ್ನು ಬಿಡುಗಡೆ ಮಾಡಲಾಗಿದೆ. ಇನ್ನು ರೂ.328.57 ಕೋಟಿ ಸಹಾಯಧನ ನೀಡಲು ಬಾಕಿ ಇರುತ್ತದೆ.